ದಿನಾಂಕಃ 09.01.2025

ಅಸಲು ದಾವ ಃ 95/2024

ಪಿ.ಡಬ್ಲ್ಯೂ: 2

<u>ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಎ.ಎಸ್. ರವರಿಂದಃ</u>

ನಾನು ನನ್ನ ಮುಖ್ಯ ವಿಚಾರಣ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಅಂಶಗಳನ್ನು ನಾನೇ ನಮ್ಮ ವಕೀಲರಿಗೆ ಹೇಳಿ ವಿವರಿಸಿದ್ದು, ಅದರಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಸಾಕ್ಷಿ ನಿಪಿ 1 ರಲ್ಲಿ ಇರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ1(ಡಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ1 ರಲ್ಲಿ ಪ್ರತಿವಾದಿಗಳು ಸಹಿ ಮಾಡಿರುವುದಾಗಿ ಗುರುತಿಸಿ ಹೇಳಿರುತ್ತಾರೆ. ಸಾಕ್ಷಿ ಪತ್ರವನ್ನು ಬಿ.ಶಿವಲಿಂಗಯ್ಯ ಬರೆದಿರುತ್ತಾರೆ ಎಂದು ಗುರುತಿಸಿ ಹೇಳಿರುತ್ತಾರೆ. ನಿಪಿ1 ರಲ್ಲಿ ದಿನಾಂಕ 05.05.2023 ರ ಹಿಂಬರಹವನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೆ ನಿಪಿ1 (ಎ) ಎಂದು ಗುರುತಿಸಲಾಗಿರುತ್ತದೆ. ಸದರಿ ಹಿಂಬರಹವನ್ನು ಪುಟ್ಟರಾಜು ಅವರು ಬರೆದಿರುತ್ತಾರೆ.

**ಪ್ರತಿವಾದಿಯರು ಲಿಖಿತ ಹೇಳಿಕೆ ಸಲ್ಲಿಸದೆ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ. ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಂ.ಎ.ಸಿ.ಟಿ

ಮದ್ದೂರು.